# ತುಮಕೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ವಿಜ್ಞಾನ ಕಾಲೇಜು,
ಬಿ.ಹೆಚ್. ರಸ್ತೆ, ತುಮಕೂರು. 572103 ದೂ.ಸಂ: 0816-2260220

ಸಂಖ್ಯೆ:ವಿವಿಕಾತು:2022-23:699 ದಿನಾಂಕ:15.02.2023

## :ದರಪಟ್ಟಿ ಆಹ್ವಾನ:

ವಿಷಯ: ತುಮಕೂರು ವಿಶ್ವವಿದ್ಯಾನಿಲಯದ ವಿಜ್ಞಾನ ಕಾಲೇಜಿನಲ್ಲಿರುವ ಕಂಪ್ಯೂಟರ್ ಉಪಕರಣಗಳ ರಿಪೇರಿ ಸಂಬಂಧ ದರಪಟ್ಟಿ ಆಹ್ವಾನಿಸುತ್ತಿರುವ ಕುರಿತು.

***

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ವಿಶ್ವವಿದ್ಯಾನಿಲಯ ವಿಜ್ಞಾನ ಕಾಲೇಜಿನಲ್ಲಿರುವ ಕಂಪ್ಯೂಟರ್ ಗಳ ದುರಸ್ಥಿ ಸಂಬಂಧ ಈ ಕೆಳಕಂಡ ವಿವರಗಳು ಹಾಗೂ ಷರತ್ತು ಮತ್ತು ನಿಬಂಧನೆಗಳೊಂದಿಗೆ ದರಪಟ್ಟಿಯನ್ನು ಆಹ್ವಾನಿಸಲಾಗಿದೆ.

| ಕ್ರ.ಸಂ | ವಿವರ | ಅಂದಾಜು ದುರಸ್ಥಿಗೊಳ್ಳಬೇಕಾದ ಉಪಕರಣಗಳ ಸಂಖ್ಯೆ | ದರ (ಪ್ರತಿ ಒಂದಕ್ಕೆ ಎಲ್ಲಾ ತೆರಿಗೆಗಳನ್ನೊಳಗೊಂಡಂತೆ) |
|---|---|---|---|
| 01 | Os instalation | 40 | |
| 02 | EVM Ssd 128gb | 8 | |
| 03 | quick heal INTERNETSECURITY | 10 | |
| 04 | ON & SWITCH | 10 | |
| 05 | I3 DESKTOP MOTHERBOARD | 8 | |
| 06 | LENOVI Adopter for desktop | 1 | |
| 07 | WD 500gb hdd | 4 | |
| 08 | Heat sing past | 10 | |
| 09 | Cymas shell | 20 | |
| 10 | Processer fan | 2 | |
| 11 | HP ALLIN ONE MOTHER BOARD | 1 | |

ಸೂಚನೆ: ದರಪಟ್ಟಿ ಸಲ್ಲಿಸುವ ವ್ಯಕ್ತಿ/ಏಜೆನ್ಸಿ/ಸಂಸ್ಥೆಯವರು ಕಾಲೇಜಿಗೆ ಖುದ್ದು ಭೇಟಿ ನೀಡಿ, ಪರಿಶೀಲಿಸಿದ ನಂತರ ದರಪಟ್ಟಿ ಸಲ್ಲಿಸುವುದು.

**ಷರತ್ತು ಮತ್ತು ನಿಬಂಧನೆಗಳು:**

1. ಮುಚ್ಚಿದ ಲಕೋಟೆಯ ಮೇಲೆ ತುಮಕೂರು ವಿಶ್ವವಿದ್ಯಾನಿಲಯದ ವಿಜ್ಞಾನ ಕಾಲೇಜಿನ ಕಂಪ್ಯೂಟರ್ ಉಪಕರಣಗಳ ರಿಪೇರಿ ಸಂಬಂಧ ದರಪಟ್ಟಿ ಎಂದು ಸ್ಪಷ್ಟವಾಗಿ ನಮೂದಿಸಬೇಕು.
2. ದರಪಟ್ಟಿಯನ್ನು ಸಲ್ಲಿಸಲು ಕೊನೆಯ **ದಿನಾಂಕ: 24.02.2023 ಅಪರಾಹ್ನ 01.30** ಗಂಟೆಯವರೆಗೆ ಸಲ್ಲಿಸಬಹುದಾಗಿದ್ದು ದರಪಟ್ಟಿಗಳನ್ನು ಮುದ್ದಾಂ ಅಥವಾ ಅಂಚೆಯ ಮೂಲಕ ಸಲ್ಲಿಸಬಹುದು. ಯಾವುದೇ ಅಂಚೆಯ ವಿಳಂಬಕ್ಕೆ ಅಥವಾ ಅಂಚೆಯು ತಲುಪದಿದ್ದಕ್ಕೆ ಕಾಲೇಜು ಜವಬ್ದಾರರಾಗುವುದಿಲ್ಲ.
3. ದರಪಟ್ಟಿಯನ್ನು **ದಿನಾಂಕ: 24.02.2023 ರಂದು ಅಪರಾಹ್ನ 1.30 ಗಂಟೆಗೆ** ತೆರೆಯಲಾಗುವುದು.

4. ದರಪಟ್ಟಿಯನ್ನು ಪ್ರಾಂಶುಪಾಲರು, ವಿಶ್ವವಿದ್ಯಾನಿಲಯ ವಿಜ್ಞಾನ ಕಾಲೇಜು, ತುಮಕೂರು ಇವರ ಹೆಸರಿಗೆ ಕಡ್ಡಾಯವಾಗಿ ಅಂಚೆಯ ಮೂಲಕ ಅಥವಾ ಖುದ್ದಾಗಿ ತಲುಪಿಸತಕ್ಕದ್ದು, ಅಂಚೆಯ ವಿಳಂಬಕ್ಕೆ ವಿಶ್ವವಿದ್ಯಾನಿಲಯ ವಿಜ್ಞಾನ ಕಾಲೇಜು ಜವಾಬ್ದಾರರಾಗುವುದಿಲ್ಲ.
5. ದರಪಟ್ಟಿಗಳನ್ನು ಯಾವುದೇ ಕಾರಣ ನೀಡದೇ ಅಂಗೀಕರಿಸುವ ಅಥವಾ ತಿರಸ್ಕರಿಸುವ ಹಕ್ಕನ್ನು ವಿಶ್ವವಿದ್ಯಾನಿಲಯ ವಿಜ್ಞಾನ ಕಾಲೇಜು ಕಾಯ್ದಿರಿಸಿಕೊಂಡಿದೆ.
6. ಸದರಿ ಕಾರ್ಯಕ್ಕೆ ಯಾವುದೇ ಮುಂಗಡವನ್ನು ಪಾವತಿಸುವುದಿಲ್ಲ.
7. ಕಂಪ್ಯೂಟರ್‌ಗಳ ರಿಪೇರಿ ಕಾರ್ಯಗಳಿಗೆ ಅಗತ್ಯ ಸಾಮಗ್ರಿಗಳನ್ನು/ಉಪಕರಣಗಳನ್ನು ತಾವೇ ಖರೀದಿಸಿ ಅಳವಡಿಸುವುದು.
8. ಕಾರ್ಯಾದೇಶವನ್ನು ಪಡೆಯುವವರು ಪ್ರಾಂಶುಪಾಲರ ನಿರ್ದೇಶನದಂತೆ ತೃಪ್ತಿಕರವಾಗಿ ಕಾರ್ಯ ನಿರ್ವಹಿಸತಕ್ಕದ್ದು.
9. ಸರಬರಾಜು ಆದೇಶದಲ್ಲಿ ನೀಡುವ ಎಲ್ಲಾ ಷರತ್ತುಗಳನ್ನು ಕಡ್ಡಾಯವಾಗಿ ಪಾಲಿಸಬೇಕು.
10. ದರಪಟ್ಟಿ ಸಲ್ಲಿಸುವ ಸಂಸ್ಥೆಯವರು ತಮ್ಮ ಸಂಸ್ಥೆಯ GSTIN No. ಮತ್ತು PAN No. ದಾಖಲೆಗಳನ್ನು ದರಪಟ್ಟಿಯ ಜೊತೆಗೆ ಲಗತ್ತಿಸಬೇಕು.
11. ದರಪಟ್ಟಿಯ ಅವಧಿಯು ದರಪಟ್ಟಿಯನ್ನು ತೆರೆದ ದಿನಾಂಕದಿಂದ 60 ದಿನಗಳವರೆಗೆ ಚಾಲ್ತಿಯಲಿರುತ್ತದೆ.
12. ದರಪಟ್ಟಿಯಲ್ಲಿ ನಮೂದಿಸಿದ ದರಗಳು ತೆರಿಗೆ ಮತ್ತು ಸೇವಾ ಶುಲ್ಕದ ಮೊತ್ತವನ್ನು ಒಳಗೊಂಡಿರತಕ್ಕದ್ದು.
13. ದರಪಟ್ಟಿಯಲ್ಲಿ ನಮೂದಿಸಿರುವ ದುರಸ್ಥಿ ಉಪಕರಣಗಳ ಪ್ರಮಾಣವನ್ನು ಹೆಚ್ಚಿಸುವ ಅಥವಾ ಕಡಿಮೆಗೊಳಿಸುವ ಹಕ್ಕನ್ನು ವಿಶ್ವವಿದ್ಯಾನಿಲಯ ವಿಜ್ಞಾನ ಕಾಲೇಜು ಕಾಯ್ದಿರಿಸಿಕೊಂಡಿರುತ್ತದೆ.
14. ಹೆಚ್ಚಿನ ವಿವರಗಳು ಅಥವಾ ಮಾಹಿತಿಯು ಅಗತ್ಯವಿದ್ದಲ್ಲಿ ಪ್ರಾಂಶುಪಾಲರು, ವಿಶ್ವವಿದ್ಯಾನಿಲಯ ವಿಜ್ಞಾನ ಕಾಲೇಜು, ತುಮಕೂರು ಇವರನ್ನು ಸಂಪರ್ಕಿಸಬಹುದು.

ಪ್ರಾಂಶುಪಾಲರು

ಪ್ರಾಂಶುಪಾಲರು
ವಿಶ್ವವಿದ್ಯಾನಿಲಯ ವಿಜ್ಞಾನ ಕಾಲೇಜು
ತುಮಕೂರು-572 103

ಪ್ರತಿಗಳು:

1. ಸೂಚನಾ ಫಲಕ, ವಿಶ್ವವಿದ್ಯಾನಿಲಯ ವಿಜ್ಞಾನ ಕಾಲೇಜು, ತುಮಕೂರು.
2. ಶ್ರೀ.ಹರೀಶ್‌ಕುಮಾರ್ ಕೆ, ಸಂಯೋಜಕರು, ವೆಬ್ ಸೈಟ್ ಸಮಿತಿ, ವಿಶ್ವವಿದ್ಯಾನಿಲಯ ವಿಜ್ಞಾನ ಕಾಲೇಜು, ತುಮಕೂರು. – ವಿಜ್ಞಾನ ಕಾಲೇಜಿನ ವೆಬ್ ಸೈಟ್ ನಲ್ಲಿ ಪ್ರಕಟಿಸಲು ಸೂಚಿಸಿದೆ.
3. ಕಚೇರಿ ಪ್ರತಿ.